ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಬಿಎಂಆರ್‌ಸಿಎಲ್ ನಲ್ಲಿ ಕನ್ನಡಿಗರ ಉದ್ಯೋಗಾವಕಾಶ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

723 (932) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಮೆಟ್ರೋ ಸಂಚಾರ ಮಾರ್ಗಗಳು ಯಾವುವು ; ಪ್ರತಿದಿನ ಪ್ರಯಾಣಿಸುವ ಪ್ರಯಾಣಿಕರ ಅಂದಾಜು ಸಂಖ್ಯೆ ಎಷ್ಟು ; (ಕಳೆದ 2 ವರ್ಷಗಳ ಅವಧಿಯ ಮಾಹಿತಿಯನ್ನು ಒದಗಿಸುವುದು)

(ಆ) ಬಿಎಂಆರ್‌ಸಿಎಲ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಗಳು ಎಷ್ಟು ; (ತಾಂತ್ರಿಕ, ಆಡಳಿತ ಮತ್ತು ಇತರೆ ವಿಭಾಗದ ಸಿಬ್ಬಂದಿ ಅಧಿಕಾರಿಗಳು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಬಿಎಂಆರ್‌ಸಿಎಲ್‌ನಲ್ಲಿ ಕನ್ನಡಿಗರಿಗೆ ಉದ್ಯೋಗಾವಕಾಶಗಳು ಲಭ್ಯವಾಗುತ್ತಿಲ್ಲ ಎಂಬುದು ನಿಜವೇ ; ಹಾಗಿದ್ದಲ್ಲಿ, ಒಟ್ಟು ಸಿಬ್ಬಂದಿಗಳು ಮತ್ತು ಕನ್ನಡಿಗ ಅಭ್ಯರ್ಥಿಗಳೆಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಈ) ಬಿಎಂಆರ್‌ಸಿಎಲ್‌ನಲ್ಲಿ ಕನ್ನಡಿಗರಿಗೆ ಹೆಚ್ಚಿನ ಉದ್ಯೋಗಾವಕಾಶ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)